# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1100
ಉತ್ತರಿಸಬೇಕಾದ ದಿನಾಂಕ : 15.12.2023
ಸದಸ್ಯರ ಹೆಸರು : ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ಸಚಿವರು : ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

| ಕ್ರಸ | ಪ್ರಶ್ನೆ | ಉತ್ತರ | Reply |
|---|---|---|---|
| ಅ) | ಸರ್ಕಾರವು ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯಿಂದ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಯಾವ ಯಾವ ಕ್ರೀಡಾ ಸಾಮಗ್ರಿಗಳನ್ನು ನೀಡಲಾಗುತ್ತಿದೆ; | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಶಾಲೆಗಳಿಗೆ ಕ್ರೀಡಾ ಸಾಮಗ್ರಿಗಳನ್ನು ನೀಡುವ ಕಾರ್ಯಕ್ರಮ ಇರುವುದಿಲ್ಲ. ಕಾಲೇಜಿನ ಯುವಜನರ ದೈಹಿಕ ಸಾಮರ್ಥ್ಯವನ್ನು ಸದೃಢಗೊಳಿಸಲು **'ಯುವ ಶಕ್ತಿ ಕೇಂದ್ರ'** ಎಂಬ ಯೋಜನೆಯನ್ನು ರಾಜ್ಯದಲ್ಲಿ ಜಾರಿಗೊಳಿಸಲಾಗಿದ್ದು, ಈ ಯೋಜನೆಯಡಿ ಜಿಮ್ ಉಪಕರಣಗಳನ್ನು ನೀಡಲಾಗುತ್ತದೆ. | There is no programme from the Department of Youth Empowerment and Sports to provide sports materials to schools. A scheme called **'Yuva Shakti Kendra'** has been implemented in the state to strengthen the physical fitness of the youth of the college under which gym equipment will be provided. |
| ಆ) | ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಕ್ರೀಡೆಯನ್ನು ಹೆಚ್ಚಿನ ರೀತಿಯಲ್ಲಿ ಪ್ರೋತ್ಸಾಹಿಸಲು ವಿದ್ಯಾರ್ಥಿಗಳಿಗೆ ವಿಶೇಷ ಕ್ರೀಡಾ ಪ್ಯಾಕೇಜನ್ನು ನೀಡುವುದರ ಜೊತೆಗೆ ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಿಗೆ ಕ್ರೀಡಾ ಸಾಮಗ್ರಿಗಳನ್ನು ನೀಡಲು ಯಾವ ಕ್ರಮವನ್ನು ಕೈಗೊಳ್ಳಲಾಗಿದೆ? | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಶಾಲಾ-ಕಾಲೇಜು ವಿದ್ಯಾರ್ಥಿಗಳಲ್ಲಿ ಕ್ರೀಡೆಯನ್ನು ಉತ್ತೇಜಿಸಲು ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ:-<br>**<u>ನಗದು ಪುರಸ್ಕಾರ:</u>** ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ವಿಜೇತರಾದ ಕ್ರೀಡಾಪಟುಗಳಿಗೆ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ.<br><br>**<u>ಶೈಕ್ಷಣಿಕ ಶುಲ್ಕ ಮರುಪಾವತಿ</u>**: ರಾಷ್ಟ್ರೀಯ ಮಟ್ಟದಲ್ಲಿ ಪದಕ ವಿಜೇತರಾದ/ ಅಂತರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದಿಂದ ರಾಷ್ಟ್ರವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಗರಿಷ್ಠ ಮೊತ್ತ ರೂ 50,000/-ಗಳವರೆಗೆ ಶೈಕ್ಷಣಿಕ ಶುಲ್ಕ ಮರು ಪಾವತಿ ಮಾಡಲಾಗುತ್ತಿದೆ.<br><br>**ಕ್ರೀಡಾ ವಿದ್ಯಾರ್ಥಿ ವೇತನ:** ರಾಜ್ಯಮಟ್ಟದಲ್ಲಿ ಪದಕ ವಿಜೇತರಾಗಿ ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಮಾಧ್ಯಮಿಕ/ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ರೂ 10,000/- ಕ್ರೀಡಾ | The Following schemes are being implemented by the Department of Youth Empowerment and Sports for the students to promote sports in a big way for school and college students:-<br>**<u>Cash Award:</u>** Cash awards are given to sports persons who have participated in national and international level official sports events and won them.<br><br>**<u>Reimbursement of tuition fee:</u>** A maximum amount of Rs.50000/- is being reimbursed to the medal winners at national level/ sports persons who have represented the state at the international level.<br><br>**<u>Sports Scholarship:</u>** A sports scholarship of Rs.10,000/- is being given to secondary/high school |

| | | | |
|---|---|---|---|
| | | ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ. | students who have won medals at State level and achieved National level achievements. |
| | | **ಕ್ರೀಡಾ ವಸತಿ ಶಾಲೆ/ ನಿಲಯಗಳಲ್ಲಿ** ಪ್ರವೇಶ ಪಡೆಯುವ ಪ್ರತಿಭಾವಂತ ಯುವ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ಕ್ರೀಡಾ ತರಬೇತಿ ಮತ್ತು ಕ್ರೀಡಾ ಸಮವಸ್ತ್ರ ಒದಗಿಸಲಾಗುತ್ತಿದೆ. ದೈಹಿಕ ಕ್ಷಮತಾ ಪರೀಕ್ಷೆಗಳಲ್ಲಿ ಹಾಗೂ ಕ್ರೀಡಾ ಕೌಶಲ್ಯ ಪರೀಕ್ಷೆ ಆಧಾರಿತವಾಗಿ 5ನೇ ತರಗತಿ ಮೇಲ್ಪಟ್ಟ ಕ್ರೀಡಾಪಟುಗಳಿಗೆ ಆಯ್ಕೆ ಪ್ರಕ್ರಿಯೆ ನಡೆಸಿ, ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ. | **Sports Hostels:** Free boarding, lodging, uniforms and sports is provided to the talented young sports persons in residential Sports Schools/hostels. The selection is conducted on the basis of physical fitness tests and sports skill test for sports persons above class 5. |
| | | **ವೃತ್ತಿಪರ ಶಿಕ್ಷಣ ಸಂಸ್ಥೆಗಳಿಗೆ ಪ್ರವೇಶಾವಕಾಶ**: ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಅತ್ಯುನ್ನತ ಸಾಧನೆ ಮಾಡಿದ ರಾಜ್ಯದ ಕ್ರೀಡಾಪಟುಗಳಿಗೆ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಕ್ರೀಡಾ ಮೀಸಲಾತಿ ಅಡಿಯಲ್ಲಿ ಇಂಜಿನಿಯರಿಂಗ್, ವೈದ್ಯಕೀಯ ಮುಂತಾದ ವೃತ್ತಿಪರ ಕೋರ್ಸ್ ಗಳಿಗೆ ಪ್ರವೇಶ ಕಲ್ಪಿಸಲಾಗುತ್ತಿದೆ. | **Admission to Professional Colleges:** Sports persons from the state who have excelled at the national and international level are being admitted to professional courses such as engineering, medical etc., under sports reservation in the Common Entrance Test. |
| | | ಶಾಲೆಗಳಿಗೆ ಕ್ರೀಡಾ ಸಾಮಗ್ರಿಗಳನ್ನು ನೀಡುವ ಯೋಜನೆ ಇರುವುದಿಲ್ಲ, ಆದರೆ ಕಾಲೇಜಿನ ಯುವಜನರ ದೈಹಿಕ ಸಾಮರ್ಥ್ಯವನ್ನು ಸದೃಢಗೊಳಿಸಲು **'ಯುವ ಶಕ್ತಿ ಕೇಂದ್ರ'** ಎಂಬ ಯೋಜನೆಯನ್ನು ರಾಜ್ಯದಲ್ಲಿ ಜಾರಿಗೊಳಿಸಲಾಗಿದ್ದು, ಈ ಯೋಜನೆಯಡಿ ಜಿಮ್ ಉಪಕರಣಗಳನ್ನು ನೀಡಲಾಗುತ್ತದೆ. | There is no programme to provide sports materials to schools, but scheme called "Yuva Shakti Kendra" has been implemented in the state to strengthen the physical fitness of the youth of the college under which gym equipment is provided |

**ಸಂಖ್ಯೆ: ವೈಎಸ್‌ಡಿ-ಇಬಿಬಿ/94/2023**

**( ಬಿ. ನಾಗೇಂದ್ರ )**
ಪರಿಶಿಷ್ಟ ಪಂಗಡಗಳ ಕಲ್ಯಾಣ,
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.